ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 16-03-2021 ಪ್ರಶ್ನೆ ಸಂಖ್ಯೆ : 1167 (1191)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರ ನೀಡಬೇಕಾದ ದಿನಾಂಕ : 16-03-2021

ಉತ್ತರಿಸುವ ಸಚಿವರು: ಮಾನ್ಯ ನಗರಾಭಿವೃದ್ಧಿ ಸಚಿವರು

ವಿಷಯ : ಗೃಹ ಭಾಗ್ಯ ಯೋಜನೆಯ ಕುರಿತು

(ಅ) ಕಳೆದ ಮೂರು ವರ್ಷಗಳಲ್ಲಿ ಪೌರ ಕಾರ್ಮಿಕರ ಗೃಹ ಭಾಗ್ಯ ಯೋಜನೆಯ ಅನ್ವಯ ನಗರಾಭಿವೃದ್ಧಿ ಇಲಾಖೆಯಿಂದ ಎಷ್ಟು ಮನೆಗಳನ್ನು ನಿರ್ಮಿಸಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) 2014-18ರ ಅವಧಿಯಲ್ಲಿ ನಗರ ಸ್ಥಳೀಯ ಸಂಸ್ಥೆಗಳಿಗೆ ಗೃಹ ಭಾಗ್ಯ ಯೋಜನೆಯ ಜಾರಿಗೆ ಬಿಡುಗಡೆ ಮಾಡಿದ ಮೊತ್ತದಲ್ಲಿ ರೂ. 50.47 ಕೋಟಿಗೂ ಹೆಚ್ಚು ಹಣವನ್ನು ವಿವಿಧ ಬ್ಯಾಂಕ್‌ಗಳಲ್ಲಿ ಡಿಪಾಸಿಟ್ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಸರ್ಕಾರದಿಂದ ಬಿಡುಗಡೆ ಮಾಡಿದ ಮೊತ್ತವನ್ನು ಸಮರ್ಪಕವಾಗಿ ನಿಗದಿಪಡಿಸಿದ ಯೋಜನೆಗೆ ಬಳಸದೆ ದುರುಪಯೋಗ ಪಡಿಸಿದ ಅಧಿಕಾರಿ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ ; ಡಿಪಾಸಿಟ್ ಮಾಡಿರುವ ಮೊತ್ತಕ್ಕೆ ಬಂದ ಬಡ್ಡಿ ಎಷ್ಟು ; ಅದನ್ನು ಯಾವ ರೀತಿಯಾಗಿ ಬಳಸಿಕೊಳ್ಳಲಾಗಿದೆ ?